2. ಪಾಲಿಕೆಯು ಪ್ರಸ್ತುತ 400 ಟನ್‌ಗಳಷ್ಟು ಕರ್ನಾಟಕ ಕಾಂಪೋಸ್ಟ್ ಡೆವಲಪ್‌ಮೆಂಟ್ ಕಾರ್ಪೋರೇಷನ್, ಬೊಮ್ಮನಹಳ್ಳಿ, ಇಲ್ಲಿಗೆ ಸಾಗಿಸಲಾಗುತ್ತಿದ್ದು, ಕಾಂಪೋಸ್ಟ್ ಹಾಗೂ ವರ್ಮಿ (ಎರೆಹುಳು ಗೊಬ್ಬರ) ಕಾಂಪೋಸ್ಟ್ ಅನ್ನು ಪ್ರತಿದಿನ ಸಂಸ್ಕರಣೆಯ ನಂತರ ಉತ್ಪಾದಿಸಲಾಗುತ್ತಿದೆ. ಸದರಿ ಸಂಸ್ಥೆಯು ಕಳೆದ 27 ವರ್ಷಗಳಿಂದ ನಡೆಯುತ್ತಿದೆ.

3. ಪಾಲಿಕೆಯು ಪ್ರತಿ ದಿನ 1000 ಟನ್‌ಗಳಷ್ಟು ಪ್ರಮಾಣದ ತ್ಯಾಜ್ಯ ವಸ್ತುಗಳನ್ನು ಬಳಸಿ ತ್ಯಾಜ್ಯ ವಸ್ತುಗಳಿಂದ ಹರಳುಗಳನ್ನು ಉತ್ಪಾದಿಸಿ ವಿದ್ಯುತ್ ತಯಾರಿಸುವ ಪ್ರಸ್ತಾವನೆಯನ್ನು ಖಾಸಗಿ ಸಹಭಾಗಿತ್ವದೊಂದಿಗೆ ಟೆಂಡರ್ ಮೂಲಕ "ಬಿಒಟಿ: (ನಿರ್ಮಾಣ ನಿರ್ವಹಣೆ ಹಸ್ತಾಂತರ) ಆಧಾರದ ಮೇಲೆ ನಿರ್ವಹಿಸಲು ಪಾಲಿಕೆಯ ನಿರ್ಣಯವಾಗಿದ್ದು, ಪ್ರಸ್ತಾವನೆಗೆ ಒಪ್ಪಂದ ಮಾಡಿಕೊಳ್ಳಲಾಗಿದೆ. ಇದಕ್ಕಾಗಿ 170 ಎಕರೆಗಳ ಪ್ರದೇಶವನ್ನು ಬೆಂಗಳೂರು ಪೂರ್ವ ತಾಲ್ಲೂಕಿನ ಕ್ಯಾಲಸನಹಳ್ಳಿಯಲ್ಲಿ ಗುರುತಿಸಲಾಗಿದೆ.

4. ಉಳಿದಂತೆ ದೂರಗಾಮಿ ದೃಷ್ಟಿಯಿಂದ ಜನಸಂಖ್ಯೆ ದಿನೇ ದಿನೇ ಬೆಳೆಯುತ್ತಿರುವ ಅಂಶವನ್ನು ಗಮನದಲ್ಲಿರಿಸಿ, ನಗರದ ಹೊರವಲಯದ ವಿವಿಧ ಪ್ರದೇಶಗಳಲ್ಲಿ ಜಾಗವನ್ನು ಗುರುತಿಸಲು ಕ್ರಮವಹಿಸಲಾಗುತ್ತಿದ್ದು, ವೈಜ್ಞಾನಿಕ ವಿಲೇವಾರಿಗಾಗಿ ವಿವಿಧ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

5716, (5819) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು, (ಶಿವಾಜಿ ನಗರ) : ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು. ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಬೆಂಗಳೂರು–ಹೊಸೂರು ನಡುವೆ ಪ್ರತಿದಿನ ಹೆಚ್ಚಿನ ಸಂಖ್ಯೆಯಲ್ಲಿ ಅನಧಿಕೃತ ಬಸ್‌ಗಳು ಸಂಚರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಇದರಿಂದ ಸರ್ಕಾರಕ್ಕೆ ಆಗುತ್ತಿರುವ ಅಂದಾಜು ನಷ್ಟವೆಷ್ಟು;

ಇ) ಪರವಾನಗಿ ಇಲ್ಲದ ಅನಧಿಕೃತ ಬಸ್‌ಗಳ ಸಂಚಾರವನ್ನು ನಿಲ್ಲಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಶ್ರೀ ಮಲ್ಲಿಕಾರ್ಜುನ ಖರ್ಗೆ, ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು.

ಅ) ಬಂದಿದೆ.

ಆ) ಸದರಿ ವಾಹನಗಳು ಕರ್ನಾಟಕಕ್ಕೆ ತೆರಿಗೆ ಪಾವತಿಸುತ್ತಿರುವುದರಿಂದ ನಷ್ಟವುಂಟಾಗುತ್ತಿಲ್ಲ.

ಇ) ಸಾರಿಗೆ ಇಲಾಖೆಯ ವತಿಯಿಂದ ವಿಶೇಷ ತಪಾಸಣಾ ಕಾರ್ಯವನ್ನು ಕೈಗೊಂಡಿದ್ದು, ವಾಹನಗಳನ್ನು ತಪಾಸಿಸಿ, ವಾಹನಗಳ ವಿರುದ್ಧ ಪ್ರಕರಣ ದಾಖಲಿಸಿ ದಂಡವನ್ನು ವಸೂಲಿ ಮಾಡಿ ವಾಹನಗಳ ಪರವಾನಿಗೆಯನ್ನು ಅಮಾನತ್ತು ಮಾಡಲಾಗುತ್ತಿದೆ.

5717, (5820) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು, (ಶಿವಾಜಿ ನಗರ) : ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು. ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿ 20 ವರ್ಷ ಆಯಸ್ಸು ಕಳೆದಿರುವ ಸರಕು ಹಾಗೂ ಸಾಗಾಣಿಕೆ ವಾಹನಗಳ ಅಂದಾಜು ಸಂಖ್ಯೆ ಎಷ್ಟು;

ಆ) ಜನಸಂಖ್ಯೆ ಮತ್ತು ಪರಿಸರ ಮಾಲಿನ್ಯ ತಪ್ಪಿಸಲು ಈ ವಾಹನಗಳನ್ನು ನಿವೃತ್ತಿಗೊಳಿಸಲು ಸರ್ಕಾರ ನಿರ್ಧರಿಸಿದೆಯೇ;

ಇ) ಹಾಗಿದ್ದಲ್ಲಿ, ಈ ನಿಯಮ ಯಾವಾಗ ಜಾರಿಗೆ ಬಂದಿದೆ;

ಈ) 20 ವರ್ಷ ಕಳೆದಿದ್ದರೂ ಸುಸ್ಥಿತಿಯಲ್ಲಿರುವ ವಾಹನಗಳಿಗೆ ವಿನಾಯಿತಿ ನೀಡಲಾಗುವುದೇ:

ಶ್ರೀ ಮಲ್ಲಿಕಾರ್ಜುನ ಖರ್ಗೆ, ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು.

ಅ) 45, 254.

ಆ) ಈ ಬಗ್ಗೆ ಕೇಂದ್ರ ಸರ್ಕಾರವು ಕ್ರಮ ಕೈಗೊಳ್ಳಬೇಕಾಗಿದೆ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

5718. (5821) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು. (ಶಿವಾಜಿ ನಗರ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿರುವ ಸರ್ಕಾರಿ ಸ್ವಾಮ್ಯದ ನಿಗಮ ಮಂಡಳಿಗಳ ಸಂಖ್ಯೆ ಎಷ್ಟು;

ಆ) ಇವುಗಳ ಪೈಕಿ, ಇಲ್ಲಿಯವರೆಗೆ ಎಷ್ಟು ನಿಗಮ ಮಂಡಳಿಗಳು ರೋಗಗ್ರಸ್ತವಾಗಿವೆ ಸೇರಲ್ಪಟ್ಟಿವೆ;

ಇ) ಕಳೆದ ಒಂದು ವರ್ಷದಿಂದ ಇವುಗಳ ಪುನಶ್ಚೇತನಕ್ಕೆ ಕೈಗೊಂಡ ಕ್ರಮಗಳೇನು ಹಾಗೂ ಖರ್ಚು ಮಾಡಿದ ಹಣವೆಷ್ಟು;

ಈ) ಈ ಎಲ್ಲಾ ಸರ್ಕಾರಿ ಸ್ವಾಮ್ಯದ ನಿಗಮ ಮಂಡಳಿಗಳ ಕಾರ್ಯ ವೈಖರಿ ಬಗ್ಗೆ ಸ್ಪಷ್ಟ ಚಿತ್ರಣ ನೀಡಲು ಶ್ವೇತಪತ್ರವನ್ನು ಸರ್ಕಾರ ಹೊರಡಿಸುತ್ತದೆಯೇ:

ಶ್ರೀ ಧರ್ಮಸಿಂಗ್, ಮಾನ್ಯ ಮುಖ್ಯಮಂತ್ರಿಗಳು

ಅ) 31–03–2004 ರ ಅಂತ್ಯಕ್ಕೆ ರಾಜ್ಯದಲ್ಲಿ ಒಟ್ಟು 92 ಸರ್ಕಾರಿ ಸ್ವಾಮ್ಯದ ನಿಗಮ ಮಂಡಳಿಗಳು ಇವೆ.

ಆ) ಇವುಗಳ ಪೈಕಿ, 24ಸರ್ಕಾರಿ ಸ್ವಾಮ್ಯದ ನಿಗಮ. ಮಂಡಳಿಗಳು ರೋಗಗ್ರಸ್ತ ಪಟ್ಟಿಗೆ ಸೇರಿವೆ.

ಇ) ಸರ್ಕಾರವು ನಿಯೋಜಿಸಿರುವ ಸಚಿವ ಸಂಪುಟ ಉಪ ಸಮಿತಿಯು ಪುನಶ್ಚೇತನಕ್ಕಿರುವ ಉದ್ದಿಮೆಗಳನ್ನು ಪ್ರತ್ಯೇಕ ಪ್ರತ್ಯೇಕವಾಗಿ ಪರಿಗಣಿಸಿ, ಸಚಿವ ಸಂಪುಟದ ಮುಂದೆ ತಂದು ಕ್ರಮ ಕೈಗೊಳ್ಳುತ್ತಿದೆ. ಇದುವರೆವಿಗೆ ಪುನಶ್ಚೇತನಕ್ಕೆ ಹಣ ಮೆಚ್ಚ ಮಾಡಿರುವುದಿಲ್ಲ.

ಈ) ಇಲ್ಲ.

5719, (6517) ಶ್ರೀ ಕಿರಣ್ ಕುಮಾರ್ ಕೆ. ಎಸ್. (ಕಳ್ಳಂಬೆಳ್ಳ) :– ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ತುಮಕೂರು ಜಿಲ್ಲೆ, ಕಳ್ಳಂಬೆಳ್ಳ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಚಿಕ್ಕನಾಯಕನಹಳ್ಳಿ ತಾಲ್ಲೂಕು, ಹುಳಿಯಾರು ಹೋಬಳಿ, ಯಳನಡು ಗ್ರಾಮದ ಮುಂದಿನ ಕೆರೆ ಕಾಮಗಾರಿ ಪ್ರಗತಿಯಲ್ಲಿದೆಯೇ:

ಆ) ಕಾಮಗಾರಿ ಪ್ರಾರಂಭವಾಗಿದ್ದು ಯಾವಾಗ ಪ್ರಗತಿ ಯಾವ ಹಂತದಲ್ಲಿದೆ; ಕಾಮಗಾರಿ ವಿವರ ನೀಡುವುದು;

ಇ) ಯಾವ ಯಾವ ಯೋಜನೆಗಳಡಿಯಲ್ಲಿ ಎಷ್ಟೆಷ್ಟು ಹಣವನ್ನು ಈ ಕೆರೆ ಕಾಮಗಾರಿಗೆ ಬಳಸಿಕೊಳ್ಳಲಾಗಿದೆ; (ಪೂರ್ಣ ವಿವರ ನೀಡುವುದು);